ಕುಂದಾಪುರ ತಾಲ್ಲೂಕಿನಲ್ಲಿ ಪ್ರೌಢಶಾಲಾ ಶಿಕ್ಷಕರ ಕೊರತೆ

1122 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನ ಪಿದ್ಗತಕಟ್ಟೆ ಪ್ರೌಢ ಶಾಲೆಯಲ್ಲಿ ಮಂಜೂರಾದ ಶಿಕ್ಷಕರ ಸಂಖ್ಯೆ ಎಷ್ಟು (ಹುದ್ದೆವಾರು ವಿವರ)

ಆ) ಈ ಕೊರತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು(ಹುದ್ದೆವಾರು ವಿವರ ನೀಡುವುದು)

ಇ) ಈ ಕೊರತೆಯನ್ನು ಯಾವಾಗ ತುಂಬಲಾಗುವುದು?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಸಚಿವರು) :

ಅ) 8 ಹುದ್ದೆಗಳು ಮಂಜಾರಾಗಿವೆ. (ಅನುಬಂಧದಲ್ಲಿ ಇರುವಂತೆ)

ಆ) ಸಹ ಶಿಕ್ಷಕರ 2 ಹುದ್ದೆಯ ಕೊರತೆ ಇದೆ.

ಇ) ಮುಂದಿನ ನೇಮಕಾತಿಯಲ್ಲಿ ತುಂಬಲಾಗುವುದು.

ಉತ್ತರ ಕನ್ನಡ ಜಿಲ್ಲೆಯ ಆಸ್ಪತ್ರೆಗಳು ಮತ್ತು ವೈದ್ಯಾಧಿಕಾರಿಗಳ ಬಗ್ಗೆ

321 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಆಸ್ಪತ್ರೆಗಳಲ್ಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳೆಷ್ಟು?

ಆ) ಇವುಗಳಲ್ಲಿ ಈಗ ಖಾಲಿ ಇರುವ ಹುದ್ದೆಗಳನ್ನು ಹಾಗೂ ಈ ಹುದ್ದೆಗಳು ಎಷ್ಟು ದಿನಗಳಿಂದ ಖಾಲಿ ಇದೆ?

ಇ) ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಈಗ ಲೋಕಸೇವಾ ಆಯೋಗದಿಂದ ನೇಮಕಾತಿ ಮಾಡಿಕೊಂಡಿರುವ ವೈದ್ಯಾಧಿಕಾರಿಗಳಲ್ಲಿ ಕೆಲವರನ್ನು ಉತ್ತರ ಕನ್ನಡ ಜಿಲ್ಲೆಗೆ ಕಳುಹಿಸಿ ಕೊಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀಮತಿ ಕೆ. ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 125 ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿವೆ.

ಆ) 40, ಸುಮಾರು ಒಂದು ವರ್ಷದಿಂದ

ಇ) ಕರ್ನಾಟಕ ಲೋಕ ಸೇವಾ ಆಯೋಗದಿಂದ ವೈದ್ಯಾಧಿಕಾರಿಗಳ ಆಯ್ಕೆಪಟ್ಟಿ ಬಂದಿದ್ದು, ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಈ) ಹೌದು

ಡೀಸಲ್ ಕೊರತೆಯಿಂದಾಗಿ ರದ್ದುಪಡಿಸಿರುವ ಬಸ್ ಮಾರ್ಗಗಳನ್ನು ಪುನರ್ ಪ್ರಾರಂಭಿಸುವುದು

1229 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡೀಸಲ್‌ನ ಕೊರತೆಯಿಂದಾಗಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಸ್ಥಗಿತಗೊಳಿಸಿರುವ ಬಸ್ ಮಾರ್ಗಗಳು ಯಾವುವು? (ತಾಲ್ಲೂಕುವಾರು ವಿವರಗಳನ್ನು ನೀಡುವುದು)